**Akashvani : Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**31.05.2024 / 19.35 hrs**

ಮುಖ್ಯಾಂಶಗಳು

೧. **ಲೋಕಸಭಾ ಚುನಾವಣೆ; ಏಳನೇ ಹಾಗೂ ಅಂತಿಮ ಹಂತಕ್ಕೆ ನಾಳೆ ಮತದಾನ**

೨. **ಬೆಂಗಳೂರಿನ 'ನಿಮ್ಹಾನ್ಸ್‌ಗೆ' ವಿಶ್ವ ಆರೋಗ್ಯ ಸಂಸ್ಥೆಯ ಪ್ರತಿಷ್ಠಿತ ನೆಲ್ಸನ್ ಮಂಡೇಲಾ ಪ್ರಶಸ್ತಿ**

೩. **ವಾಯುವ್ಯ ಭಾರತದಲ್ಲಿ ಬಿಸಿಗಾಳಿ; ಕರ್ನಾಟಕದಲ್ಲಿ ಮುಂದಿನ ಆರು ದಿನ ಸಾಧಾರಣ ಮಳೆ ಸಾಧ್ಯತೆ**

೪. **ಸಿಂಗಾಪುರ ಓಪನ್ ಬ್ಯಾಡ್ಮಿಂಟನ್; ಮಹಿಳೆಯರ ಡಬಲ್ಸ್‌ನಲ್ಲಿ ಸೆಮಿಫೈನಲ್ಸ್ ಪ್ರವೇಶಿಸಿದ ಭಾರತದ ಗಾಯತ್ರಿ ಗೋಪಿಚಂದ್-ತ್ರೀಸಾ ಜೊಲ್ಲಿ ಜೋಡಿ**

೫. **ಪ್ಯಾರಿಸ್ ಒಲಿಂಪಿಕ್ಸ್‌ಗೆ ಅರ್ಹತೆ ಪಡೆದ ಭಾರತದ ಬಾಕ್ಸರ್ ನಿಶಾಂತ್ ದೇವ್**

<><*<><><>*><>

ಏಳನೇ ಹಾಗೂ ಅಂತಿಮ ಹಂತದ ಲೋಕಸಭಾ ಚುನಾವಣೆಗೆ ನಾಳೆ ಮತದಾನ ನಡೆಯಲಿದೆ. ಬಹಿರಂಗ ಪ್ರಚಾರಕ್ಕೆ ನಿನ್ನೆಯೇ ತೆರೆಬಿದ್ದಿದ್ದು, ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಅಭ್ಯರ್ಥಿಗಳು ಮತದಾರರ ಮನೆಗಳಿಗೆ ತೆರಳಿ ಅವರ ಮನವೊಲಿಕೆಗೆ ಅಂತಿಮ ಕಸರತ್ತು ನಡೆಸಿದರು. ನಾಳೆ ಬೆಳಗ್ಗೆ ೭ ಗಂಟೆಯಿಂದ ಸಂಜೆ ೬ ಗಂಟೆವರೆಗೆ ಮತದಾನ ನಡೆಯಲಿದೆ. ಮುಕ್ತ ಹಾಗೂ ನ್ಯಾಯಯುತ ಮತದಾನಕ್ಕೆ ಚುನಾವಣಾ ಆಯೋಗ ಸಕಲ ಸಿದ್ಧತೆ ಮಾಡಿಕೊಂಡಿದೆ. ಈ ಹಂತದಲ್ಲಿ ಏಳು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶವಾದ ಚಂಡೀಗಢ ಸೇರಿದಂತೆ ಒಟ್ಟು ೫೭ ಲೋಕಸಭಾ ಕ್ಷೇತ್ರಗಳಲ್ಲಿ ಚುನಾವಣೆ ನಡೆಯಲಿದ್ದು, ೯೦೪ ಅಭ್ಯರ್ಥಿಗಳ ರಾಜಕೀಯ ಭವಿಷ್ಯ ನಿರ್ಧಾರವಾಗಲಿದೆ. ಉತ್ತರ ಪ್ರದೇಶ ಮತ್ತು ಪಂಜಾಬ್‌ನಲ್ಲಿ ತಲಾ ೧೩, ಪಶ್ಚಿಮ ಬಂಗಾಳದಲ್ಲಿ ೯, ಬಿಹಾರದಲ್ಲಿ ೮, ಒಡಿಶಾದಲ್ಲಿ ೬, ಹಿಮಾಚಲ ಪ್ರದೇಶದಲ್ಲಿ ೪, ಜಾರ್ಖಂಡ್‌ನಲ್ಲಿ ೩ ಮತ್ತು ಕೇಂದ್ರಾಡಳಿತ ಪ್ರದೇಶವಾದ ಚಂಡೀಗಢದ ೧ ಲೋಕಸಭಾ ಕ್ಷೇತ್ರಕ್ಕೆ ನಾಳೆ ಚುನಾವಣೆ ನಡೆಯಲಿದೆ. ಇದೇ ವೇಳೆ ಒಡಿಶಾದ ೪೨ ವಿಧಾನಸಭಾ ಕ್ಷೇತ್ರಗಳಿಗೂ ನಾಳೆ ಮತದಾನ ಜರುಗಲಿದೆ. ಈ ಹಂತದಲ್ಲಿ ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವ ಹಾಗೂ ಬಿಜೆಪಿ ನಾಯಕ ಅನುರಾಗ್ ಸಿಂಗ್ ಠಾಕೂರ್, ಕಾಂಗ್ರೆಸ್ ನಾಯಕ ವಿಕ್ರಮಾಧಿತ್ಯ ಸಿಂಗ್, ತೃಣಮೂಲ ಕಾಂಗ್ರೆಸ್ ಮುಖಂಡ ಅಭಿಷೇಕ್ ಬ್ಯಾನರ್ಜಿ ಕಣದಲ್ಲಿರುವ ಪ್ರಮುಖರಾಗಿದ್ದಾರೆ. ನಾಳೆಗೆ ಸಾರ್ವತ್ರಿಕ ಚುನಾವಣೆ ಮುಕ್ತಾಯವಾಗಲಿದ್ದು, ಲೋಕಸಭೆ ಚುನಾವಣೆಯ ಮತ ಎಣಿಕೆ ಕಾರ್ಯ ಜೂನ್ ೪ರಂದು ನಡೆಯಲಿದೆ.

<><*<><><>*><>

ಬಿಜೆಪಿಯ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ತಮಿಳುನಾಡಿನ ಕನ್ಯಾಕುಮಾರಿಯಲ್ಲಿರುವ ಸ್ವಾಮಿ ವಿವೇಕಾನಂದ ಸ್ಮಾರಕದಲ್ಲಿ ೪೫ ಗಂಟೆಗಳ ಸುದೀರ್ಘ ಧ್ಯಾನದ ಎರಡನೇ ದಿನದಲ್ಲಿದ್ದಾರೆ. ಕನ್ಯಾಕುಮಾರಿಗೆ ನಿನ್ನೆ ಆಗಮಿಸಿದ ಪ್ರಧಾನಿ, ಧ್ಯಾನಕ್ಕೂ ಮುನ್ನ ಭಗವತಿ ಅಮ್ಮನವರ ದೇವಾಲಯಕ್ಕೆ ಭೇಟಿ ನೀಡಿ, ಪೂಜೆ ಸಲ್ಲಿಸಿದರು. ಪ್ರಧಾನಿ ಧ್ಯಾನಾಸಕ್ತರಾಗಿರುವ ಸ್ಥಳ ಸ್ವಾಮಿ ವಿವೇಕಾನಂದ ಅವರು ೧೮೯೨ ರಲ್ಲಿ ಧ್ಯಾನ ಮಾಡಿದ ಸ್ಥಳವಾಗಿದೆ. ಕನ್ಯಾಕುಮಾರಿಯು ಭಾರತದ ದಕ್ಷಿಣದ ತುದಿಯಲ್ಲಿದ್ದು, ಬಂಗಾಳಕೊಲ್ಲಿ, ಅರೇಬಿಯನ್ ಸಮುದ್ರ ಮತ್ತು ಹಿಂದೂ ಮಹಾಸಾಗರ ಸಂಗಮವಾಗುವ ಸ್ಥಳವಾಗಿದೆ. ೧೯೯೧ರ ಡಿಸೆಂಬರ್ ೧೧ ರಂದು ಅಂದರೆ, ೩ ವರ್ಷಗಳ ಹಿಂದೆ ನರೇಂದ್ರ ಮೋದಿ ಅವರು ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಏಕತಾ ಯಾತ್ರೆಯಲ್ಲಿ ಭಾಗಿಯಾಗಿದ್ದರು.

<><*<><><>*><>

ಪ್ರಸಕ್ತ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಆದಾಯ ತೆರಿಗೆ ಇಲಾಖೆ, ದಾಖಲೆಯ ಒಂದು ಸಾವಿರದ ೧೦೦ ಕೋಟಿ ರೂಪಾಯಿ ನಗದು ಮತ್ತು ಚಿನ್ನಾಭರಣಗಳನ್ನು ವಶಪಡಿಸಿಕೊಂಡಿದೆ. ಕಳೆದ ಬಾರಿ ೨೦೧೯ರ

ಸಾರ್ವತ್ರಿಕ ಚುನಾವಣೆ ಸಮಯದಲ್ಲಿ ಆದಾಯ ತೆರಿಗೆ ಇಲಾಖೆಯು ವಶಪಡಿಸಿಕೊಂಡ ೩೯೦ ಕೋಟಿ ರೂಪಾಯಿಗಳಿಗೆ ಹೋಲಿಸಿದರೆ, ಇದು ಶೇಕಡ ೧೮೨ ರಷ್ಟು ಹೆಚ್ಚಳವಾಗಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

<><*<><>*><>

೨೦೨೪ ರಲ್ಲಿ ಆರೋಗ್ಯ ಕ್ಷೇತ್ರದಲ್ಲಿನ ಪ್ರಚಾರಕ್ಕಾಗಿ ವಿಶ್ವ ಆರೋಗ್ಯ ಸಂಸ್ಥೆಯಿಂದ ನೀಡುವ ಪ್ರತಿಷ್ಠಿತ ನೆಲ್ಸನ್ ಮಂಡೇಲಾ ಪ್ರಶಸ್ತಿಗೆ ಬೆಂಗಳೂರಿನ ನಿಮ್ಹಾನ್ಸ್ ಸಂಸ್ಥೆ ಭಾಜನವಾಗಿದೆ. ಕೇಂದ್ರ ಆರೋಗ್ಯ ಸಚಿವ ಡಾ.ಮನ್ಸೂಖ್ ಮಾಂಡವೀಯ ಅವರು, ನಿಮ್ಹಾನ್ಸ್ ಸಂಸ್ಥೆಗೆ ಅಭಿನಂದನೆ ಸಲ್ಲಿಸಿದ್ದು, ಈ ಪ್ರಶಸ್ತಿ "ಅಂತರ್ಗತ ಆರೋಗ್ಯ ರಕ್ಷಣೆಯಲ್ಲಿ ಭಾರತದ ಪ್ರಯತ್ನಗಳಿಗೆ ಮನ್ನಣೆ" ಎಂದು ಶ್ಲಾಘಿಸಿದ್ದಾರೆ. ಈ ಪ್ರಶಸ್ತಿಯು ನಿಮ್ಹಾನ್ಸ್‌ನ ಸಮರ್ಪಣೆ ಮತ್ತು ಮಾನಸಿಕ ಆರೋಗ್ಯ ಮತ್ತು ಯೋಗಕ್ಷೇಮವನ್ನು ಉತ್ತೇಜಿಸಲು ಅತ್ಯುತ್ತಮ ಕೊಡುಗೆಗಳಿಗೆ ಸಾಕ್ಷಿಯಾಗಿದೆ.

<><*<><>*><>

ಕೇಂದ್ರ ಸರ್ಕಾರ ನಿವೃತ್ತಿ ಗ್ರಾಚ್ಯುಟಿ ಮತ್ತು ಮರಣ ಗ್ರಾಚ್ಯುಟಿ ಗರಿಷ್ಠ ಮಿತಿಯನ್ನು ೨೦ ಲಕ್ಷದಿಂದ ೨೫ ಲಕ್ಷ ರೂಪಾಯಿಗೆ ಹೆಚ್ಚಳ ಮಾಡಿದೆ. ಈ ಕುರಿತು ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಸಚಿವಾಲಯ ಆದೇಶ ಹೊರಡಿಸಿದೆ. ಪರಿಷ್ಕೃತ ಗ್ರಾಚ್ಯುಟಿ ಮಿತಿಯು ೨೦೨೪ರ ಜನವರಿ ಒಂದರಿಂದ ಪೂರ್ವಾನ್ವಯವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

<><*<><>*><>

ಆಮ್ ಆದ್ಮಿ ಪಕ್ಷದ ರಾಜ್ಯಸಭೆ ಸದಸ್ಯೆ ಸ್ವಾತಿ ಮಲಿವಾಲ್ ಮೇಲಿನ ಹಲ್ಲೆ ಪ್ರಕರಣದಲ್ಲಿ ತಮ್ಮನ್ನು ಬಂಧಿಸಿರುವುದನ್ನು ಪ್ರಶ್ನಿಸಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಆಪ್ತ ಸಹಾಯಕ ಬಿಭವ್ ಕುಮಾರ್ ಸಲ್ಲಿಸಿರುವ ಅರ್ಜಿ ಕುರಿತ ಆದೇಶವನ್ನು ದೆಹಲಿ ಹೈಕೋರ್ಟ್ ಕಾಯ್ದಿರಿಸಿದೆ. ಕಳೆದ ತಿಂಗಳು ಅರವಿಂದ ಕೇಜ್ರಿವಾಲ್ ಅವರ ದೆಹಲಿಯ ಅಧಿಕೃತ ನಿವಾಸದಲ್ಲಿ ಬಿಭವ್ ಕುಮಾರ್ ತಮ್ಮ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಿ ಸ್ವಾತಿ ಮಲಿವಾಲ್ ದೂರು ನೀಡಿದ್ದರು. ಅದರಂತೆ ಬಿಭವ್ ಕುಮಾರ್ ಅವರನ್ನು ಇದೇ ೧೮ರಂದು ಪೊಲೀಸರು ಬಂಧಿಸಿದ್ದರು. ಇದನ್ನು ಪ್ರಶ್ನಿಸಿ ಅವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಸೋಮವಾರ ಬಿಭವ್ ಕುಮಾರ್ ಅವರಿಗೆ ದೆಹಲಿ ನ್ಯಾಯಾಲಯ ಜಾಮೀನು ನಿರಾಕರಿಸಿತು. ಸದ್ಯ ಅವರು ನ್ಯಾಯಾಂಗ ಬಂಧನದಲ್ಲಿದ್ದಾರೆ.

<><*<><>*><>

ವಾಯುವ್ಯ ಭಾರತದಲ್ಲಿ ಬಿಸಿಗಾಳಿ ಮುಂದುವರಿದ್ದು, ದೇಶದ ಇತರೆ ಭಾಗಗಳಲ್ಲಿ ತಾಪಮಾನ ಕೊಂಚ ಇಳಿಮುಖವಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಈ ಕುರಿತು ಆಕಾಶವಾಣಿಗೆ ಮಾಹಿತಿ ನೀಡಿದ ಭಾರತೀಯ ಹವಾಮಾನ ಇಲಾಖೆಯ ವಿಜ್ಞಾನಿ ಡಾ. ಆರ್.ಕೆ.ಜೆನಮಣಿ, ದೇಶದ ವಿವಿಧ ಭಾಗಗಳಲ್ಲಿ ಗರಿಷ್ಠ ತಾಪಮಾನ ಒಂದರಿಂದ ಎರಡು ಡಿಗ್ರಿ ಸೆಲ್ಸಿಯಸ್ ಇಳಿಕೆಯಾಗಿದೆ. ಆದರೂ ಪಂಜಾಬ್, ಹರ್ಯಾಣ, ಚಂಡೀಗಢ್, ರಾಜಸ್ಥಾನ, ಉತ್ತರ ಪ್ರದೇಶ, ಬಿಹಾರ, ಮತ್ತು ಒಡಿಶಾದಲ್ಲಿ ಬಿಸಿಗಾಳಿ ಮುಂದುವರಿಯಲಿದೆ ಎಂದು ತಿಳಿಸಿದ್ದಾರೆ. ಮುಂದಿನ ನಾಲ್ಕು ದಿನಗಳಲ್ಲಿ ಮಧ್ಯ ಭಾರತದಲ್ಲಿ ಗರಿಷ್ಠ ತಾಪಮಾನ ೨ ರಿಂದ ೪ ಡಿಗ್ರಿ ಸೆಲ್ಸಿಯಸ್ ಕಡಿಮೆಯಾಗುವ ನಿರೀಕ್ಷೆ ಇದೆ. ಇದೇ ವೇಳೆ, ನೈಋತ್ಯ ಮುಂಗಾರು- ಕೇರಳ ಮತ್ತು ಈಶಾನ್ಯ ಭಾರತದ ಬಹುತೇಕ ಭಾಗಗಳಲ್ಲಿ ಮುಂದುವರೆದಿದೆ. ಮುಂದಿನ ಆರು ದಿನಗಳಲ್ಲಿ ಕರ್ನಾಟಕ, ಕೇರಳ, ತಮಿಳುನಾಡು, ಪುದುಚೆರಿ, ಆಂಧ್ರ ಪ್ರದೇಶ, ತೆಲಂಗಾಣ, ಲಕ್ಷ್ಯದ್ವೀಪ ಹಾಗೂ ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ ಹಲವೆಡೆ ಬಿರುಗಾಳಿ ಸಹಿತ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<><>*><>

ಬಿಹಾರದಲ್ಲಿ ಬಿಸಿಗಾಳಿ ಪರಿಣಾಮ ಕಳೆದ ಮೂರು ದಿನಗಳಲ್ಲಿ ೮೦ ಮಂದಿ ಮೃತಪಟ್ಟಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಔರಂಗಾಬಾದ್ ಜಿಲ್ಲೆ ಒಂದರಲ್ಲೇ ಗರಿಷ್ಠ ೧೯ ಮಂದಿ ಪ್ರಾಣ ಕಳೆದುಕೊಂಡಿದ್ದಾರೆ. ಅದೇ ರೀತಿ ಭೋಜ್‌ಪುರ ಜಿಲ್ಲೆಯಲ್ಲಿ ೯, ಅರ್ವಾಲ್, ಬಕ್ಸರ್, ರೋಹ್ತಾಸ್, ಜೆಹನಾಬಾದ್ ಮತ್ತು ಬೇಗುಸರಾಯ್ ಜಿಲ್ಲೆಗಳಲ್ಲಿ ತಲಾ ೮ ಮಂದಿ ಅಸುನೀಗಿದ್ದಾರೆ. ಕೈಮೂರ್ ಜಿಲ್ಲೆಯಲ್ಲಿ ೬, ಛಾಪ್ರಾ ಮತ್ತು ಗಾಯಾದಲ್ಲಿ ತಲಾ ಮೂವರು ಹಾಗೂ ಶೇಖ್‌ಪುರಾ ಮತ್ತು ಮುಂಗೇರ್‌ನಲ್ಲಿ ತಲಾ ಇಬ್ಬರು ಸಾವನ್ನಪ್ಪಿದ್ದಾರೆ. ಅಲ್ಲದೇ ಬಿಸಿಲಿನ ತಾಪಕ್ಕೆ ರಾಜ್ಯದಲ್ಲಿ ಸುಮಾರು ೩೦೦ ಮಂದಿ ಅಸ್ವಸ್ಥರಾಗಿದ್ದು, ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದಿದ್ದಾರೆ ಎಂದು

ಅಧಿಕೃತ ಮೂಲಗಳು ತಿಳಿಸಿವೆ. ಇನ್ನೊಂದೆಡೆ, ಒಡಿಶಾದ ಸುಂದರ್‌ಗಡ್ ಜಿಲ್ಲೆಯಲ್ಲಿ ಬಿಸಿಗಾಳಿಯ ತೀವ್ರತೆಗೆ ೧೪ ಮಂದಿ ಸಾವನ್ನಪ್ಪಿದ್ದಾರೆ.

**<><*<><>*><>**

ರೆಮಾಲ್ ಚಂಡಮಾರುತದ ಪರಣಾಮವಾಗಿ ಸುರಿದ ಧಾರಕಾರ ಮಳೆಯಿಂದಾಗಿ ಅಸ್ಸಾಂನ ಒಂಬತ್ತು ಜಿಲ್ಲೆಗಳಲ್ಲಿ ಪ್ರವಾಹ ಪರಿಸ್ಥಿತಿ ಮುಂದುವರೆದಿದೆ. ರಾಜ್ಯದಲ್ಲಿ ಪ್ರವಾಹದಿಂದ ಉಂಟಾದ ಅವಘಡಗಳಲ್ಲಿ ಇದುವರೆಗೂ ಇಬ್ಬರು ಮೃತಪಟ್ಟಿದ್ದಾರೆ. ಮಳೆ ಮತ್ತು ಪ್ರವಾಹದಿಂದಾಗಿ ನಗಾಂವ್, ಕರೀಮ್‌ಗಂಜ್, ಹೈಲಕಂಡಿ, ಪಶ್ಚಿಮ ಕರ್ಬಿ ಆಂಗ್ಲಾಂಗ್, ಕ್ಯಾಚಾರ್, ಹೊಜೈ, ಗೋಲಾಘಾಟ್, ದಿಮಾ ಹಸಾವೊ ಮತ್ತು ಕರ್ಬಿ ಆಂಗ್ಲಾಂಗ್ ಜಿಲ್ಲೆಗಳ ೩೮೬ ಹಳ್ಳಿಗಳ ಸುಮಾರು ಎರಡು ಲಕ್ಷ ನಾಗರಿಕರ ಜನಜೀವನ ಅಸ್ತವ್ಯಸ್ತವಾಗಿದೆ. ೯೫ ನಿರಾಶ್ರಿತರ ಶಿಬಿರಗಳಲ್ಲಿ ೩೫ ಸಾವಿರಕ್ಕೂ ಹೆಚ್ಚು ಮಂದಿ ಆಶ್ರಯ ಪಡೆದಿದ್ದಾರೆ. ಹಾಫ್‌ಲಾಂಗ್-ಬಂಡಾರ್‌ಪುರ ಮಾರ್ಗದಲ್ಲಿ ಭೂಕುಸಿತ ಉಂಟಾದ ಪರಿಣಾಮ, ಈ ಮಾರ್ಗದ ಎಲ್ಲಾ ರೈಲು ಸೇವೆಗಳನ್ನು ರದ್ದುಗೊಳಿಸಲಾಗಿದೆ. ಪ್ರವಾಹ ಪೀಡಿತ ಪ್ರದೇಶಗಳಲ್ಲಿ ರಾಜ್ಯ ವಿಪತ್ತು ನಿರ್ವಹಣಾ ಪಡೆ, ಅಗ್ನಿಶಾಮಕ ದಳ ಮತ್ತು ತುರ್ತು ಸೇವೆಗಳ ಸಿಬ್ಬಂದಿ ನಾಗರಿಕರ ರಕ್ಷಣೆಯಲ್ಲಿ ನಿರತರಾಗಿದ್ದಾರೆ. ಇದೇ ವೇಳೆ ಮುಂದಿನ ಎರಡು ದಿನಗಳು ಅಸ್ಸಾಂನ ೯ ಜಿಲ್ಲೆಗಳಲ್ಲಿ ಗುಡುಗು ಸಹಿತ ಧಾರಾಕಾರ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇನ್ನೊಂದೆಡೆ, ಅಸ್ಸಾಂ, ತ್ರಿಪುರಾ, ಮಣಿಪುರ, ಮೇಘಾಲಯ ಮತ್ತು ಮಿಜೋರಾಮ್‌ನಲ್ಲಿ ರೆಮಲ್ ಚಂಡಮಾರುತದಿಂದ ಉಂಟಾದ ಅವಘಡಗಳು ಮತ್ತು ಪ್ರಸ್ತುತ ಪರಿಸ್ಥಿತಿ ಕುರಿತು ಈ ರಾಜ್ಯಗಳ ಮುಖ್ಯಮಂತ್ರಿಗಳಿಂದ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಾಹಿತಿ ಪಡೆದಿದ್ದಾರೆ. ಅಲ್ಲದೇ ಕೇಂದ್ರದಿಂದ ಎಲ್ಲಾ ರೀತಿಯ ಅಗತ್ಯ ನೆರವು ನೀಡುವುದಾಗಿ ಭರವಸೆ ನೀಡಿದ್ದಾರೆ. ಅವಘಡಗಳಲ್ಲಿ ಮೃತಪಟ್ಟ ಕುಟುಂಬಗಳಿಗೆ ಸಂತಾಪ ಸೂಚಿಸಿರುವ ಅಮಿತ್ ಶಾ ಅವರು, ಗಾಯಾಗೊಂಡವರು ಶೀಘ್ರ ಗುಣಮುಖರಾಗಲೆಂದು ಪ್ರಾರ್ಥಿಸಿದ್ದಾರೆ.

**<><*<><>*><>**

ಜಮ್ಮು ಮತ್ತು ಕಾಶ್ಮೀರದ ಜಮ್ಮು-ಪೂಂಚ್ ಹೆದಾರಿಯಲ್ಲಿ ಕಂದಕ್ಕೆ ಯಾತ್ರಿಕರ ಬಸ್ ಉರುಳಿಬಿದ್ದು ನಿನ್ನೆ ನಡೆದ ಅಪಘಾತದಲ್ಲಿ ಮೃತಪಟ್ಟವರ ಸಂಖ್ಯೆ ೨೨ ಕ್ಕೆ ಏರಿಕೆಯಾಗಿದೆ. ಘಟನೆಯಲ್ಲಿ ೬೯ ಯಾತ್ರಿಕರು ಗಾಯಗೊಂಡಿದ್ದಾರೆ. ಮೃತಪಟ್ಟವರು ಉತ್ತರ ಪ್ರದೇಶ ಮತ್ತು ರಾಜಸ್ಥಾನಕ್ಕೆ ಸೇರಿದವರಾಗಿದ್ದಾರೆ. ಘಟನೆ ಹಿನ್ನೆಲೆಯಲ್ಲಿ ಜಮ್ಮು ಮತ್ತು ಕಾಶ್ಮೀರ ಸರ್ಕಾರ, ಆರು ಅಧಿಕಾರಿಗಳನ್ನು ಅಮಾನತು ಮಾಡಿದೆ.

**<><*<><>*><>**

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಮುಂಬೈ ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೭೫ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೩ ಸಾವಿರದ ೯೬೧ ಅಂಕಗಳು ದಾಖಲಾಗಿದೆ. ಅದೇ ರೀತಿ, ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೪೨ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೨ ಸಾವಿರದ ೫೩೧ ಅಂಕಗಳು ದಾಖಲಾಗಿದೆ. ಡಾಲರ್ ಎದುರು ರೂಪಾಯಿ ಮೌಲ್ಯ ೮೩ ರೂಪಾಯಿ ೪೯ ಪೈಸೆಯಷ್ಟಾಗಿದೆ.

**<><*<><>*><>**

ಸಿಂಗಾಪುರದಲ್ಲಿ ನಡೆಯುತ್ತಿರುವ ಸಿಂಗಾಪುರ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಮಹಿಳೆಯರ ಡಬಲ್ಸ್ ವಿಭಾಗದಲ್ಲಿ ಭಾರತದ ಗಾಯತ್ರಿ ಗೋಪಿಚಂದ್ ಮತ್ತು ತ್ರೀಸಾ ಜೊಲ್ಲಿ ಜೋಡಿಯು ಸೆಮಿಫೈನಲ್ ಪ್ರವೇಶಿಸಿದೆ. ಇಂದು ನಡೆದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ದಕ್ಷಿಣ ಕೊರಿಯಾದ ಕಿಮ್ ಸೋ ಯೋಂಗ್ ಮತ್ತು ಕಾಂಗ್ ಹೀ ಯೋಂಗ್ ಜೋಡಿಯನ್ನು ೧೮-೨೧, ೨೧-೧೯ ಮತ್ತು ೨೪-೨೨ ಸೆಟ್‌ಗಳಿಂದ ಪರಾಭವಗೊಳಿಸಿದ ಗಾಯತ್ರಿ ಗೋಪಿಚಂದ್ ಮತ್ತು ತ್ರೀಸಾ ಜೊಲ್ಲಿ ಸೆಮಿಫೈನಲ್ ಪ್ರವೇಶಿಸಿದ್ದಾರೆ.

**<><*<><>*><>**

ಥಾಯ್ಲೆಂಡ್‌ನ ಬ್ಯಾಂಕಾಕ್‌ನಲ್ಲಿ ನಡೆಯುತ್ತಿರುವ ವಿಶ್ವ ಬಾಕ್ಸಿಂಗ್ ಅರ್ಹತಾ ಪಂದ್ಯಾವಳಿಯ ೭೧ ಕೆಜಿ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಗೆಲುವು ಸಾಧಿಸುವ ಮೂಲಕ ಭಾರತದ ಬಾಕ್ಸರ್ ನಿಶಾಂತ್ ದೇವ್ ಪ್ಯಾರಿಸ್ ಒಲಿಂಪಿಕ್ಸ್‌ಗೆ ಅರ್ಹತೆ ಪಡೆದಿದ್ದಾರೆ. ಅಲ್ಲದೇ ಪ್ಯಾರಿಸ್ ಒಲಿಂಪಿಕ್ಸ್‌ಗೆ ಅರ್ಹತೆ ಪಡೆದ ಮೊದಲ ಪುರುಷ ಬಾಕ್ಸರ್ ಆಗಿದ್ದಾರೆ. ಇಂದು ನಡೆದ ೭೧ ಕೆಜಿ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ನಿಶಾಂತ್ ದೇವ್ ಅವರು ಮೊಲ್ಡೊವಾದ ಬಾಕ್ಸರ್ ವಾಸಿಲೆ ಸೆಬೊಟರಿ ಅವರನ್ನು ೫-೦ ಅಂತರದಿಂದ ಮಣಿಸಿದ್ದಾರೆ.